**PRESSMAN**
PRESS CLIPPING

| | |
|---|---|
| Publication | Udayavani |
| Language/Frequency | Tamil/Daily |
| Published from | Bangalore |
| Circulation | 71,000 |
| Date | 11 November 2014 |

Client: ERA Foundation

Caption: Common Entrance Test For PG Medical Courses

ಉದಯವಾಣಿ

Tuesday, 11th November 2014

# ಖಾಸಗಿ ವಿವಿಗಳ ವೈದ್ಯ ಪಿ.ಜಿ.ಗೆ ಪ್ರತ್ಯೇಕ ಸಿಇಟಿ

- ವೈದ್ಯ, ದಂತವೈದ್ಯ ಸ್ನಾತಕೋತ್ತರ ಪ್ರವೇಶಕ್ಕೆ ಆನ್‌ಲೈನ್ ಪರೀಕ್ಷೆ: ಎರಾ ಪ್ರತಿಷ್ಠಾನ

**ಬೆಂಗಳೂರು:** ದೇಶದ ಖಾಸಗಿ ಮತ್ತು ಸ್ವಾಯತ್ತ ವಿಶ್ವವಿದ್ಯಾಲಯಗಳ ಸ್ನಾತಕೋತ್ತರ ವೈದ್ಯಕೀಯ ಮತ್ತು ದಂತ ಕೋರ್ಸ್‌ಗಳಿಗೆ ಏಕರೂಪ ಪ್ರವೇಶ ಪರೀಕ್ಷೆ ನಡೆಸಲು ಎರಾ ಪ್ರತಿಷ್ಠಾನ ( ERA foundation ) ತೀರ್ಮಾನಿಸಿದೆ.

ಆನ್‌ಲೈನ್ ಮೂಲಕ ಪ್ರವೇಶ ಪರೀಕ್ಷೆ ನಡೆಸಲಾಗುತ್ತಿದ್ದು, ಅಖಿಲ ಭಾರತೀಯ ಪ್ರವೇಶ ಪರೀಕ್ಷೆ ಬರೆಯಲು ಇಚ್ಛಿಸುವ ವಿದ್ಯಾರ್ಥಿಗಳು ನೋಂದಣಿ ಮಾಡಿಕೊಳ್ಳಬಹುದು.

ಏಕರೂಪ ಪ್ರವೇಶ ಪರೀಕ್ಷೆ ಕುರಿತು ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಗೋಕುಲ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ. ಆರ್.ಜಯರಾಂ, ಸ್ನಾತಕೋತ್ತರ ವೈದ್ಯಕೀಯ ಮತ್ತು ದಂತವೈದ್ಯ ಕೋರ್ಸ್‌ಗಳಿಗೆ 2015ರ ಫೆ.15ರಂದು ಆನ್‌ಲೈನ್ ಪ್ರವೇಶ ಪರೀಕ್ಷೆ ನಡೆಯಲಿದ್ದು, ಫೆ.17ರಂದು ಫಲಿತಾಂಶ ಪ್ರಕಟಿಸಲಾಗುವುದು. 2014ರ ನ. 15ರಿಂದ ಪ್ರವೇಶ ಪರೀಕ್ಷೆ ನೋಂದಣಿ ಕಾರ್ಯ ಆರಂಭವಾಗಲಿದೆ. ವಿದ್ಯಾರ್ಥಿಗಳಿಗೆ ಅನುಕೂಲವಾಗಲೆಂದು ದೇಶದಲ್ಲಿ 30ಕ್ಕೂ ಹೆಚ್ಚು ನಗರದಲ್ಲಿ ಪರೀಕ್ಷೆ ನಡೆಯಲಿದೆ ಎಂದು ತಿಳಿಸಿದರು.

ದೇಶದ ಶೈಕ್ಷಣಿಕ ವ್ಯವಸ್ಥೆಯಲ್ಲಿ ಸಕಾರಾತ್ಮಕ ಬದಲಾವಣೆ ತರಲು ಈ ಯೋಜನೆ ರೂಪಿಸಲಾಗಿದೆ. ಸದ್ಯಕ್ಕೆ ಸ್ನಾತಕೋತ್ತರ ವೈದ್ಯಕೀಯ ಮತ್ತು ದಂತವೈದ್ಯ ಕೋರ್ಸ್‌ಗಳಿಗೆ ಮಾತ್ರ ಪ್ರವೇಶ ಪರೀಕ್ಷೆ ನಡೆಸಲಾಗುತ್ತಿದೆ. ಮುಂದಿನ ದಿನದಲ್ಲಿ ಎಲ್ಲ ವೃತ್ತಿಪರ ಕೋರ್ಸ್‌ಗಳಿಗೆ ಏಕರೂಪ ಪ್ರವೇಶ ಪರೀಕ್ಷೆಯನ್ನು ವಿಸ್ತರಿಸಲಾಗುವುದು. ಎರಾ ಪ್ರತಿಷ್ಠಾನದೊಂದಿಗೆ ಸಹಭಾಗಿತ್ವ ಹೊಂದುವ ವಿಶ್ವವಿದ್ಯಾಲಯಗಳು ಪ್ರತ್ಯೇಕ ಪ್ರವೇಶ ಪರೀಕ್ಷೆ ನಡೆಸುವಂತಿಲ್ಲ ಎಂದು ಹೇಳಿದರು.

ದೇಶಾದ್ಯಂತ 100 ಸ್ವಾಯತ್ತ ವಿಶ್ವವಿದ್ಯಾಲಯಗಳು ಮತ್ತು 100 ಖಾಸಗಿ ವಿಶ್ವವಿದ್ಯಾಲಯಗಳಿವೆ. ರಾಜ್ಯದಲ್ಲಿ ಬೆಂಗಳೂರಿನ ಎಂ.ಎಸ್. ರಾಮಯ್ಯ ವಿಶ್ವವಿದ್ಯಾಲಯ, ಮೈಸೂರಿನ ಜೆಎಸ್‌ಎಸ್ ವಿಶ್ವವಿದ್ಯಾಲಯ, ಕೋಲಾರದ ದೇವರಾಜ ಅರಸು ವಿಶ್ವವಿದ್ಯಾಲಯಗಳು ಸಹಭಾಗಿತ್ವಕ್ಕೆ ಒಪ್ಪಿಗೆ ಸೂಚಿಸಿವೆ. ಇನ್ನು ಕೆಲವು ವಿಶ್ವವಿದ್ಯಾಲಯಗಳೂ ಪ್ರತಿಷ್ಠಾನದೊಂದಿಗೆ ಸಹಭಾಗಿತ್ವಕ್ಕೆ ಸಹಮತ ವ್ಯಕ್ತಪಡಿಸಲಿವೆ ಎಂದರು.

ಹೆಚ್ಚಿನ ಮಾಹಿತಿಗಾಗಿ erafoundation.india.org ವೆಬ್‌ಸೈಟ್ ಸಂಪರ್ಕಿಸಬಹುದು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ವಿಐಟಿ ವಿಶ್ವವಿದ್ಯಾಲಯದ ಕುಲಪತಿ ಡಾ.ಜಿ.ವಿಶ್ವನಾಥನ್, ಎರಾ ಫೌಂಡೇಶನ್ ಆಡಳಿತ ಮಂಡಳಿ ಅಧ್ಯಕ್ಷ ಮತ್ತು ರಾಜ್ಯ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಎಸ್.ವಿ.ರಂಗನಾಥ್ ಇತರರು ಉಪಸ್ಥಿತರಿದ್ದರು.